--

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 278 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಮರಿತಿಬ್ಬೇಗೌಡ |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 12-07-2018 |
| ಪ್ರಶ್ನೆ | | ಉತ್ತರ |
| (ಅ) | ಯು.ಜಿ.ಸಿ. 7ನೇ ವೇತನ ಶ್ರೇಣಿಯನ್ನು ಎಂದಿನಿಂದ ಘೋಷಣೆ ಮಾಡಲಾಗಿದೆ | ಕೇಂದ್ರ ಮಾನವ ಸಂಪನ್ಮೂಲ ಮಂತ್ರಾಲಯದ ದಿನಾಂಕ: 02-11-2017ರ ಪತ್ರದಲ್ಲಿ ಕೇಂದ್ರ ವೇತನ ಆಯೋಗದ ಶಿಫಾರಸ್ಸಿನಂತೆ ದಿನಾಂಕ: 01-01-2016ರಿಂದ ಅನ್ವಯವಾಗುವಂತೆ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ಅಧ್ಯಾಪಕರುಗಳು ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳಿಗೆ 7ನೇ ವೇತನ ಶ್ರೇಣಿಯನ್ನು ಅನುಷ್ಠಾನಗೊಳಿಸಲು ಘೋಷಿಸಲಾಗಿರುತ್ತದೆ. |
| (ಆ) | ರಾಜ್ಯದಲ್ಲಿನ ಪ್ರಥಮ ದರ್ಜೆ ಕಾಲೇಜು ಹಾಗೂ ವಿಶ್ವವಿದ್ಯಾಲಯದ ಅಧ್ಯಾಪಕರಿಗೆ 7ನೇ ಶ್ರೇಣಿಯನ್ನು ತರುವಲ್ಲಿ ಇದುವರೆಗೂ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ರಾಜ್ಯದಲ್ಲಿನ ಪ್ರಥಮ ದರ್ಜೆ ಕಾಲೇಜು ಹಾಗೂ ವಿಶ್ವವಿದ್ಯಾಲಯದ ಅಧ್ಯಾಪಕರಿಗೆ 7ನೇ ಶ್ರೇಣಿಯನ್ನು ಜಾರಿಗೊಳಿಸುವ ಸಂಬಂಧ ಕೇಂದ್ರ ಮಾನವ ಸಂಪನ್ಮೂಲ ಮಂತ್ರಾಲಯದ ದಿನಾಂಕ: 02-11-2017ರ ಪತ್ರದ ಮೇರೆಗೆ ಸರ್ಕಾರದ ಆದೇಶ ಸಂ. ಇಡಿ 483 ಯುಎನ್ಇ 2017, ದಿನಾಂಕ: 27-03-2018ರಲ್ಲಿ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಸಮಿತಿಯು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳಿಂದ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಅರ್ಹ ಬೋಧಕರುಗಳಿಗೆ 7ನೇ ಪರಿಷ್ಕೃತ ವೇತನ ಶ್ರೇಣಿಯನ್ನು ಜಾರಿಗೊಳಿಸುವುದರಿಂದ ಉಂಟಾಗುವ ಹೆಚ್ಚುವರಿ ವೆಚ್ಚಗಳ ವಿವರಗಳನ್ನು ಪಡೆದು ಸ್ಪಷ್ಟ ಅಂಕಿ-ಅಂಶಗಳ ವರದಿ/ ಕ್ರೋಢೀಕೃತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸಂಬಂಧಪಟ್ಟ ಇಲಾಖೆಯೊಂದಿಗೆ ಸಮಾಲೋಚಿಸಿ, ನಿಯಮಾನುಸಾರ ಜಾರಿಗೊಳಿಸಲು ಪರಿಶೀಲಿಸಲಾಗುವುದು. |
| ಇ) | ರಾಜ್ಯದಲ್ಲಿ ಯಾವ ಕಾಲಮಿತಿಯಲ್ಲಿ ಜಾರಿಗೊಳಿಸಲಾಗುವುದು? | |

ಸಂಖ್ಯೆ: ಇಡಿ 245 ಯುಎನ್ಇ 2018

(ಜಿ.ಟಿ. ದೇವೇಗೌಡ)

ಉನ್ನತ ಶಿಕ್ಷಣ ಸಚಿವರು